ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	699
ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು	:	ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ	:	19-02-2018
ಉತ್ತರಿಸುವ ಸಚಿವರು	:	ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಮತ್ತು ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕ್ರ ಸಂ	ಪ್ರಶ್ನೆ	ಉತ್ತರ
	ಬೆಳಗಾವಿ ದಕ್ಷಿಣ ಮತ ಕ್ಷೇತ್ರದಲ್ಲಿ ಇದುವರೆಗೆ ಸರ್ಕಾರ ನೀಡಿರುವ ಎ.ಪಿ.ಎಲ್ ಹಾಗೂ ಬಿ.ಪಿ.ಎಲ್ ಕಾರ್ಡ್‌ಗಳೆಷ್ಟು;	ಬೆಳಗಾವಿ ದಕ್ಷಿಣ ಮತ ಕ್ಷೇತ್ರದಲ್ಲಿ ಇದುವರೆಗೆ 36,888 ಎನ್.ಪಿ.ಹೆಚ್.ಹೆಚ್ ಹಾಗೂ 33,641 ಪಿ.ಹೆಚ್.ಹೆಚ್ + ಎಎವೈ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ.
ಆ)	ಬಿ.ಪಿ.ಎಲ್ ಕಾರ್ಡು ಬಗದೇ ಅರ್ಜಿ ಸಲ್ಲಿಸಿದ್ದರೂ ಇದುವರೆಗೆ ನೀಡದಿರಲು ಕಾರಣವೇನು;	ಪಡಿತರ ಚೀಟಿ ವಿತರಿಸುವಲ್ಲಿ ವಿಳಂಬವಾಗದಂತೆ ಕ್ರಮವಹಿಸಲು ಸಂಪೂರ್ಣ ವಿಲೇವಾರಿ ಪ್ರಕ್ರಿಯೆಯಲ್ಲಿ ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. ಪ್ರತಿ ಅರ್ಜಿದಾರರ ಕುಟುಂಬ ಸದಸ್ಯರ ವಾರ್ಷಿಕ ಆದಾಯ ದೃಢೀಕರಣ ಪತ್ರ ಹಾಗೂ ಜಾತಿ ದೃಢೀಕರಣ ಪತ್ರಗಳನ್ನು ಸಂಬಂಧಪಟ್ಟ ಇಲಾಖೆಯಿಂದ ಪಡೆಯುವ ಕ್ರಿಯೆಯಲ್ಲಿ ವಿಳಂಬತೆಯನ್ನು ಗುರುತಿಸಿದ್ದು ಈ ಕಾರ್ಯವನ್ನು ಕೂಡ ಚುರುಕುಗೊಳಿಸಲು ತಾಂತ್ರಿಕವಾಗಿ ಎಲ್ಲಾ ತರಹದ ಅಗತ್ಯ ಮಾರ್ಪಾಡುಗಳನ್ನು ಮಾಡಲಾಗಿರುತ್ತದೆ. ಹಾಗಾಗಿ ಪಡಿತರ ಚೀಟಿ ವಿತರಿಸುವಲ್ಲಿ ಯಾವುದೇ ವಿಳಂಬಗಳು ಆಗದಂತೆ ಕ್ರಮವಹಿಸಲಾಗಿದೆ ಹಾಗೂ ಬಾಕಿ ಅರ್ಜಿಗಳನ್ನು ಆಹಾರ ನಿರೀಕ್ಷಕರ ಲಾಗಿನ್‌ನಲ್ಲಿ ಆದಾಯ ದೃಢೀಕರಣ ಪತ್ರಗಳನ್ನು ಆಹಾರ ದತ್ತಾಂಶದಲ್ಲಿ ನಮೂದಿಸಿ ಅರ್ಹ ಅರ್ಜಿಗಳನ್ನು ಅನುಮೋದಿಸಿ ಪಡಿತರ ಚೀಟಿ ವಿತರಿಸಲು ಅವಕಾಶ ಕಲ್ಪಿಸಲಾಗುತ್ತದೆ.
ಇ)	ಹಲವಾರು ವರ್ಷಗಳಿಂದ ಅರ್ಜಿ ಸಲ್ಲಿಸಿ ಕಾರ್ಡು ಪಡೆಯದಿರುವ ಕುಟುಂಬಗಳು ಎಷ್ಟು;	2017ನೇ ಸಾಲಿನಲ್ಲಿ ಬೆಳಗಾವಿ ತಾಲ್ಲೂಕಿನಲ್ಲಿ ಒಟ್ಟು 6941 ಆದ್ಯತಾ (ಪಿ.ಹೆಚ್.ಹೆಚ್) ಕುಟುಂಬಗಳು ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿದ್ದು, ಈ ಪೈಕಿ 5731 ಅರ್ಜಿಗಳನ್ನು ಈಗಾಗಲೇ ಇತ್ಯರ್ಥ ಪಡಿಸಲಾಗಿದೆ ಹಾಗೂ 389 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. ಇನ್ನುಳಿದ 821 ಅರ್ಜಿಗಳ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದೆ. ಆದ್ಯತೇತರ (ಎನ್.ಪಿ.ಹೆಚ್.ಹೆಚ್) 147 ಕುಟುಂಬಗಳು ಪಡಿತರ ಚೀಟಿ ಕೋರಿ ಅರ್ಜಿಗಳನ್ನು ಸಲ್ಲಿಸಿದ್ದು, ಈ ಪೈಕಿ 147 ಅರ್ಜಿಗಳನ್ನು ಈಗಾಗಲೇ ಇತ್ಯರ್ಥ ಪಡಿಸಲಾಗಿದೆ.
ಈ)	ಎಷ್ಟು ದಿನಗಳಲ್ಲಿ ಕಾರ್ಡು ವಿತರಿಸಲಾಗುವುದು?	ವಿತರಣೆಗೆ ಬಾಕಿ ಇರುವ ಪಡಿತರ ಚೀಟಿಗಳನ್ನು ವಿಲೇವಾರಿ ಮಾಡುವ ಕಾರ್ಯ ಸುಮಾರು ಒಂದು ತಿಂಗಳಲ್ಲಿ ಪೂರ್ಣಗೊಳ್ಳಲಿದೆ ಹಾಗೂ ಆನ್‌ಲೈನ್‌ನಲ್ಲಿ ಪಡಿತರ ಚೀಟಿ ಅರ್ಜಿಗಳನ್ನು ಸ್ವೀಕರಿಸುವ ಮತ್ತು ಪಡಿತರ ಚೀಟಿಗಳನ್ನು ವಿತರಿಸುವ ಕ್ರಿಯೆ ನಿರಂತರವಾದ ಪ್ರಕ್ರಿಯಾಗಿದೆ.

ಆನಾಸ 47 ಡಿಆರ್‌ಎ 2018

(ಯು.ಟಿ.ಖಾದರ್)
ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ